# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಜಿ.ನಾಗಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಂಡ್ರಿ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 660 ಗ್ರಾಪಂಕಾ 2016, ದಿನಾಂಕ 27.10.2016.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: ಉಪಲೋಕ್-2/ಡಿಇ/604/2016/ಎಆರ್ಇ-8, ದಿನಾಂಕ 20.02.2017.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ಶ್ರೀ ಜಿ ನಾಗಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಂಡ್ರಿ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರ ವಿರುದ್ಧ ವಸತಿ ಯೋಜನೆಯಡಿ ಫಲಾನುಭವಿಗಳ ಆಯ್ಕೆಯಲ್ಲಿ ಅವ್ಯವಹಾರ ಎಸಗಿರುತ್ತಾರೆಂದು ಶ್ರೀಮತಿ ಬಡೇಲ್ ಆಂಜನಮ್ಮ ಕೋಂ ಹನುಮಂತಪ್ಪ, ಬಂಡ್ರಿ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರು ಲೋಕಾಯುಕ್ತ ಸಂಸ್ಥೆಗೆ ಸಲ್ಲಿಸಿದ ದೂರಿನನ್ವಯ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿನ ಮಾನ್ಯ ಉಪಲೋಕಾಯುಕ್ತರ ವರದಿಯನ್ವಯ ಲೋಕಾಯುಕ್ತ ಸಂಸ್ಥೆಯು ಪ್ರಕರಣದ ಸಂಬಂಧ ಕೆಳಕಂಡ ಆರೋಪಗಳ ಬಗ್ಗೆ ಸದರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಲಾಗಿತ್ತು.

> "ಶ್ರೀ ಜಿ ನಾಗಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರು ಹೇಳಿಕೆ ಸಲ್ಲಿಸಲು ಒಂದು ತಿಂಗಳ ಕಾಲಾವಕಾಶ ಕೋರಿದ್ದು, ಮೂರು ಬಾರಿ ಹೇಳಿಕೆ ಸಲ್ಲಿಸುವಂತೆ ಲಿಖಿತವಾಗಿ ತಿಳಿಸಲಾಗಿದ್ದರೂ ಸಹ ಶ್ರೀಮತಿ ಬಡೇಲ್ ಆಂಜನಮ್ಮ ಮತ್ತು ಶ್ರೀಮತಿ ಬಸಮ್ಮ ಇವರುಗಳ ಹೆಸರನ್ನು ವಸತಿ ಫಲಾನುಭವಿಗಳ ಪಟ್ಟಿಯಿಂದ ಕೈಬಿಟ್ಟಿರುವುದಕ್ಕೆ, ತಮ್ಮ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ತಮ್ಮ ಹೇಳಿಕೆಯನ್ನು ಸಲ್ಲಿಸದೆ ಕರ್ತವ್ಯಲೋಪ ಎಸಗಿರುವುದು ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆ."

ವಿಚಾರಣಾ ವರದಿಯನ್ವಯ, ವಿಚಾರಣಾವಧಿಯಲ್ಲಿ ಶ್ರೀ ಜಿ ನಾಗಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಂಡ್ರಿ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರು ದಿನಾಂಕ: 31.10.2017 ರಂದು ಮರಣ ಹೊಂದಿರುವುದರಿಂದ ಸದರಿಯವರ ವಿರುದ್ಧ ಶಿಸ್ತು ನಡವಳಿಕೆಗಳನ್ನು ಕೈಬಿಡಲು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆರೋಪಿತ ನೌಕರರು ದಿನಾಂಕ: 31.10.2017 ರಂದು ಮರಣ ಹೊಂದಿರುವುದರಿಂದ ಸದರಿಯವರ ವಿರುದ್ಧ ಶಿಸ್ತು ನಡವಳಿಕೆಗಳನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

.......2

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 107 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 05.04.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿ ನಾಗಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಂಡ್ರಿ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರು ದಿನಾಂಕ: 31.10.2017 ರಂದು ಮರಣ ಹೊಂದಿರುವುದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನನ್ವಯ ಲೋಕಾಯುಕ್ತ ಪ್ರಕರಣ ಸಂಬಂಧ ಸದರಿಯವರ ವಿರುದ್ಧದ ಶಿಸ್ತು ನಡವಳಿಕೆಗಳನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬಳ್ಳಾರಿ ಜಿಲ್ಲಾ ಪಂಚಾಯತಿ, ಬಳ್ಳಾರಿ.
5) ಕಾರ್ಯನಿರ್ವಾಹಕ ಅಧಿಕಾರಿ, ಸಂಡೂರು ತಾಲ್ಲೂಕು ಪಂಚಾಯತಿ, ಸಂಡೂರು, ಬಳ್ಳಾರಿ ಜಿಲ್ಲೆ.
6) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.